ಕೋಲಾರ ಜಿಲ್ಲೆ, ಚಿಂತಾಮಣಿ ತಾಲ್ಲೂಕಿನ ಭಟ್ಲಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು

೧೭೭೮. ಶ್ರೀ ಚೌಡರೆಡ್ಡಿ (ಚಿಂತಾಮಣಿ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಕೋಲಾರ ಜಿಲ್ಲೆ, ಚಿಂತಾಮಣಿ ತಾಲ್ಲೂಕಿನ ಭಟ್ಲಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯೇನಾದರೂ ಇದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು).—

ಭಟ್ಲಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ೩೦ ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಆದುದರಿಂದ, ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪುನಃ ಮೇಲ್ದರ್ಜೆಗೇರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಚಿಂತಾಮಣಿ ತಾಲ್ಲೂಕು ಮುರುಗಮಲ್ಲ ಹೋಬಳಿ ಎಗವಕೋಟೆ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯುವ ಬಗ್ಗೆ

೧೭೭೯. ಶ್ರೀ ಚೌಡರೆಡ್ಡಿ (ಚಿಂತಾಮಣಿ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚಿಂತಾಮಣಿ ತಾಲ್ಲೂಕಿನ ಮುರುಗಮಲ್ಲ ಹೋಬಳಿ, ಎಗವಕೋಟೆ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯುವ ಪ್ರಸ್ತಾವನೆಯೇನಾದರೂ ಸರ್ಕಾರದ ಮುಂದೆ ಬಾಕಿ ಇದೆಯೇ ?

ಆ) ಹಾಗಿದ್ದಲ್ಲಿ, ಯಾವಾಗಿನಿಂದ ಬಾಕಿ ಇದೆ ಹಾಗೂ ಇದಕ್ಕೆ ಕಾರಣಗಳೇನು ?

ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರವು ನಿಗಧಿಪಡಿಸಿರುವ ನಿಯಮಾವಳಿ (ನಾರ್ಮ್ಸ್)ಗಳೇನಾದರೂ ಇದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇದೆ. ಸರ್ಕಾರಿ ಆದೇಶ ಸಂಖ್ಯೆ ಆಕುಕ ೩೪೯ ಸಿಜಿಎಸ್ ೮೬ ದಿ. ೧೧-೫-೧೯೮೮ರ ಮೇರೆಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಯಲು ಸೀಮೆಯಲ್ಲಿ ಪ್ರತಿ ೩೦,೦೦೦ ಜನಸಂಖ್ಯೆಗೊಂದರಂತೆ ಹಾಗೂ ಆದಿವಾಸಿ ಹಾಗೂ ಗುಡ್ಡಗಾಡು ಪ್ರದೇಶದಲ್ಲಿ ಪ್ರತಿ ೩೦,೦೦೦ ಜನಸಂಖ್ಯೆಗೊಂದರಂತೆ ಸ್ಥಾಪಿಸಲಾಗುತ್ತಿದೆ.

ತುಮಕೂರು ಡೈರಿ ಯೋಜನೆಯಲ್ಲಿ ದುರಾಡಳಿತ ನಡೆಯುತ್ತಿರುವುದು

೧೮೮. ಶ್ರೀ ಕೆ. ಲಕ್ಕಪ್ಪ (ಕಾಣಿಗಲ್).—ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಪಶು ಸಂಗೋಪನೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತುಮಕೂರು ಡೈರಿ ಯೋಜನೆಯಲ್ಲಿ ದುರಾಡಳಿತ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ತುಮಕೂರು ಡೈರಿ ಯೋಜನೆಯಲ್ಲಿ ಹಣ ದುರುಪಯೋಗ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಆಗಿದ್ದಲ್ಲಿ, ಈ ಬಗ್ಗೆ ತಪ್ಪಿತಸ್ಥರ ಮೇಲೆ ತೆಗೆದುಕೊಂಡ ಕ್ರಮ